**ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು –560 001**

ಸಂಖ್ಯೆ:.ಸಿ4(3) ಇತರೆ ವಿ.ಭತ್ಯೆ 03/2013–14 ದಿನಾಂಕ:13–07–2018

## ಜ್ಞಾಪನಾ

ವಿಷಯ:–ದಿನಾಂಕ.01.08.2008 ರ ನಂತರ ಪ್ರೌಢ ಶಾಲಾ ಶಿಕ್ಷಕರ ಹುದ್ದೆಗೆ ನೇರ ನೇಮಕಾತಿ ಹಾಗೂ ಮುಂಬಡ್ತಿ ಹೊಂದಿದ್ದ ಶಿಕ್ಷಕರುಗಳಿಗೆ ನೀಡಿರುವ ವಿಶೇಷ ಭತ್ಯೆ ಕಟಾವಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ಕುರಿತು.

ಉಲ್ಲೇಖ:–1.ಈ ಕಛೇರಿ ಅ.ಸ.ಪತ್ರ ಸಂಖ್ಯೆ ಆಯವ್ಯಯ(ಬಿ)ವಿ.ಭ.ವರದಿ 01/2017–18 ದಿನಾಂಕ.04.11.2017

2.ದಿನಾಂಕ.13.07.2018 ರಂದು ಮೇಲ್ಮನೆ ಸಭಾಪತಿಗಳು ಮತ್ತು ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯ.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ.01.08.2008 ರ ನಂತರ ನೇಮಕಗೊಂಡ ಹಾಗೂ ಪ್ರಾಥಮಿಕ ಶಾಲಾ ಸಹ ಶಿಕ್ಷಕರ ವೃಂದದಿಂದ ಪ್ರೌಢ ಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿ ಹೊಂದಿದ ಶಿಕ್ಷಕರಿಗೆ ನೀಡಿದ್ದ ವಿಶೇಷ ಭತ್ಯೆಯನ್ನು ಉಲ್ಲೇಖ(1) ರ ಈ ಕಛೇರಿ ಪತ್ರದಲ್ಲಿ ತಡೆಹಿಡಿಯಲು ಸೂಚಿಸಲಾಗಿತ್ತು.

ದಿನಾಂಕ.13.07.2018 ರಂದು ಮೇಲ್ಮನೆ ಸಭಾಪತಿಗಳ ಮತ್ತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೆಲವು ಅಧಿಕಾರಿಗಳು ದಿನಾಂಕ.01.08.2008 ರ ನಂತರ ನೇಮಕಾತಿ ಮತ್ತು ಬಡ್ತಿ ಹೊಂದಿದ ಪ್ರೌಢಶಾಲಾ ಶಿಕ್ಷಕರಿಗೆ ನೀಡಿರುವ ವಿಶೇಷ ಭತ್ಯೆಯನ್ನು ಕಟಾವಣೆ ಮಾಡುತ್ತಿರುವ ಹಿನ್ನೆಲೆಯಲ್ಲಿ ಶಿಕ್ಷಕರುಗಳ ವೇತನವನ್ನು ತಡೆಹಿಡಿದಿರುವುದಾಗಿ ತಿಳಿಸಿರುತ್ತಾರೆ.

ಈ ಉದ್ದೇಶದಿಂದ ಯಾವುದೇ ಕಾರಣಕ್ಕೂ ಶಿಕ್ಷಕರುಗಳ ವೇತನವನ್ನು ತಡೆಹಿಡಿಯಬಾರದಾಗಿ ತಿಳಿಸಿ, ಹಾಗೂ ಮುಂದಿನ ಆದೇಶದವರೆಗೆ ತಾತ್ಕಾಲಿಕವಾಗಿ ವಿಶೇಷ ಭತ್ಯೆಯ ಕಟಾವಣೆಗಳನ್ನು ಸ್ಥಗಿತಗೊಳಿಸಲು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಿಂದ ನಿರ್ದೇಶಿಸಲ್ಪಟ್ಟಿರುತ್ತೇನೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1.ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಅಗತ್ಯ ಕ್ರಮಕ್ಕಾಗಿ
2.ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
3.ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ) ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:–**

1.ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು ರವರ ಮುಖಾಂತರ ಮಾನ್ಯ ಶಿಕ್ಷಕರ ಸಚಿವರ ಅವಗಾಹನೆಗೆ ತರಲು ಕೋರಿದೆ.
2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ.
3.ಕಛೇರಿ ಪ್ರತಿ

D:\C4(3)\Date1-8-2008 all.docx
D:\C4(3)\Date1-8-2008 all.docx